**All India Radio: Bangalore**
**Regional Bulletin In Kannada**
**23.02.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಇಸ್ರೋ ಯಶಸ್ಸಿನ ವ್ಯಾಪ್ತಿ ವಿಶಾಲವಾಗಿದೆ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ಕಲಬುರಗಿಯಲ್ಲಿ ವಚನ ಮಂಟಪ ನಿರ್ಮಾಣಕ್ಕೆ ನೀಲ ನಕ್ಷೆ ತಯಾರಿ - ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ
3. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ
4. ಬಾಗಲಕೋಟೆಯ ಮುಧೋಳದಲ್ಲಿ ರನ್ನ ವೈಭವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ
5. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ; ಭಾರತಕ್ಕೆ ೨೪೨ ರನ್‌ಗಳ ಗೆಲುವಿನ ಗುರಿ ನೀಡಿದ ಪಾಕಿಸ್ತಾನ

<><><><>

ಬಾಹ್ಯಾಕಾಶ ವಿಜ್ಞಾನದಲ್ಲಿನ ಸಾಧನೆ, ಉಡಾವಣಾ ವಾಹನಗಳ ತಯಾರಿಕೆ, ಚಂದ್ರಯಾನ, ಮಂಗಳಯಾನ, ಆದಿತ್ಯ ಎಲ್-೧ ರ ಯಶಸ್ಸು ಸೇರಿದಂತೆ ಇಸ್ರೋ ಸಾಧನೆ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಕೊಂಡಾಡಿದ್ದಾರೆ. ತಮ್ಮ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದ ೧೧೯ನೇ ಆವೃತ್ತಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬಾಹ್ಯಾಕಾಶ ವಿಜ್ಞಾನಿಗಳ ತಂಡದಲ್ಲಿ ನಾರಿ ಶಕ್ತಿಯ ಪಾಲ್ಗೊಳ್ಳುವಿಕೆ ಅಧಿಕವಾಗುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**ಧ್ವನಿ: ಪ್ರಧಾನಿ ಮೋದಿ (ಇಸ್ರೋ) (೪೨ ಸೆಕೆಂಡ್‌ಗಳು)**

ಆರೋಗ್ಯಪೂರ್ಣ ಮತ್ತು ಸದೃಢ ದೇಶದ ನಿರ್ಮಾಣದ ಹಾದಿಯಲ್ಲಿ ಸ್ಥೂಲಕಾಯ ಒಂದು ಸವಾಲಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ. ಭಾರತ ಅತ್ಯಂತ ರೋಮಾಂಚಕ ಸಸ್ಯ ಮತ್ತು ಪ್ರಾಣಿಗಳ ಪರಿಸರ ವ್ಯವಸ್ಥೆ ಹೊಂದಿದೆ. ಇದರ ಜೊತೆಗೆ ವನ್ಯಜೀವಿಗಳು ನಮ್ಮ ಇತಿಹಾಸ ಮತ್ತು ಸಂಸ್ಕೃತಿಯಲ್ಲಿ ಅಂತರ್ಗತವಾಗಿವೆ ಎಂದು ತಿಳಿಸಿದರು. ಕರ್ನಾಟಕದಲ್ಲಿ ಹುಲಿವೇಶ, ತಮಿಳುನಾಡಿನ ಪುಲಿ ಮತ್ತು ಕೇರಳದ ಪುಲಿಕಲಿ ಯಂತಹ ಅನೇಕ ಸಾಂಸ್ಕೃತಿಕ ನೃತ್ಯಗಳು, ಪ್ರಕೃತಿ ಮತ್ತು ವನ್ಯಜೀವಿಗಳೊಂದಿಗೆ ಸಂಬಂಧ ಹೊಂದಿವೆ ಎಂದು ತಿಳಿಸಿದ್ದಾರೆ. ಕರ್ನಾಟಕದ

ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹುಲಿಗಳ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ ಎಂದು ಹರ್ಷ ವ್ಯಕ್ತಪಡಿಸಿದ ಅವರು, ಹುಲಿಯನ್ನು ಪೂಜಿಸುವ ಸೋಲಿಗ ಬುಡಕಟ್ಟು ಜನಾಂಗದವರಿಗೆ ಇದರ ಶ್ರೇಯಸ್ಸು ಸಲ್ಲುತ್ತದೆ ಎಂದು ಕೊಂಡಾಡಿದ್ದಾರೆ. ಉತ್ತರಾಖಂಡದಲ್ಲಿ ನಡೆದ ರಾಷ್ಟ್ರೀಯ ಕ್ರೀಡಾಕೂಟದ ಬಗ್ಗೆ ಉಲ್ಲೇಖಿಸಿದ ಪ್ರಧಾನಿ, ಈ ಕ್ರೀಡಾಕೂಟದಲ್ಲಿ ದೇಶಾದ್ಯಂತದ ೧೧ ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಅದ್ಭುತ ಪ್ರದರ್ಶನ ನೀಡಿದ್ದಾರೆ. ಕ್ರೀಡಾಕೂಟದಲ್ಲಿ ಅದ್ಭುತ ಪ್ರದರ್ಶನ ತೋರಿದ ಕರ್ನಾಟಕದ ಈಜುಗಾರ್ತಿ ಧಿನಿಧಿ ದೇಸಿಂಗು, ಆಂಧ್ರ ಪ್ರದೇಶದ ಜ್ಯೋತಿ ಯಾರ್ರಾಜಿ ಸೇರಿದಂತೆ ಹಲವು ಕ್ರೀಡಾಪಟುಗಳು ದೇಶಕ್ಕೆ ಹೊಸ ಭರವಸೆ ಎಂದು ತಿಳಿಸಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (ರಾಷ್ಟ್ರೀಯ ಕ್ರೀಡಾಕೂಟ) (೩೨ ಸೆಕೆಂಡ್‌ಗಳು)**

ಮುಂದಿನ ತಿಂಗಳು ಮಾರ್ಚ್ ೮ ರಂದು ಆಚರಿಸಲಾಗುವ ಅಂತರಾಷ್ಟ್ರೀಯ ಮಹಿಳಾ ದಿನಕ್ಕಾಗಿ ವಿಶೇಷ ಉಪಕ್ರಮ ಘೋಷಿಸಿದ ಪ್ರಧಾನಿ, ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳು ಹಾಗೂ ನಮೋ ಆಪ್ ವೇದಿಕೆಯ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಯಶಸ್ಸು ಸಾಧಿಸಿರುವ ಹಾಗೂ ತಮ್ಮದೇ ಛಾಪು ಮೂಡಿಸಿರುವ ದೇಶದ ಸ್ಫೂರ್ತಿಧಾಯಕ ಮಹಿಳೆಯರು ತಮ್ಮ ಕಾರ್ಯ ಹಾಗೂ ಅನುಭವಗಳನ್ನು ದೇಶ ವಾಸಿಗಳೊಂದಿಗೆ ಹಂಚಿಕೊಳ್ಳಲು ಅವಕಾಶ ಕಲ್ಪಿಸಲಿದ್ದಾರೆ.

<><><><>

ಕಲಬುರಗಿಯಲ್ಲಿ ಭವ್ಯವಾದ "ವಚನ ಮಂಟಪ ತಲೆ ಎತ್ತಲಿದೆ. ಖ್ಯಾತ ಶಿಲ್ಪಿಗಳಿಂದ ಭವ್ಯ ವಚನ ಮಂಟಪದ ನೀಲ ನಕ್ಷೆ ತಯಾರಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ವಚನ ಮಂಟಪದ ಮೂಲಕ ಬಸವಾದಿ ಶರಣರ ತತ್ವಗಳನ್ನು ಮುಂದಿನ ಪೀಳಿಗೆಗೆ ದಾರಿದೀಪವಾಗುವ, ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಪ್ರಗತಿಪರ ಚಿಂತನೆಯ ಸಾರವನ್ನು ಪ್ರತಿಬಿಂಬಿಸುವ ಕೇಂದ್ರವಾಗಲಿದೆ ಎಂದು ಹೇಳಿದ್ದಾರೆ. ಬುದ್ಧ, ಬಸವ ಮತ್ತು ಬಾಬಾಸಾಹೇಬ್ ಅಂಬೇಡ್ಕರ್ ಅವರ ತತ್ವಗಳು ಭಾರತದಲ್ಲಿ ಸಾಮಾಜಿಕ, ರಾಜಕೀಯ ಸ್ಥರಗಳಲ್ಲಿ ಆಳವಾಗಿ ಹೆಣೆದುಕೊಂಡಿವೆ. ವಚನ ಮಂಟಪ ಸ್ಥಾಪಿಸುವ ಮೂಲಕ, ಕರ್ನಾಟಕದ ಸಾಂಸ್ಕೃತಿಕ ಪರಂಪರೆಯನ್ನು ಗೌರವಿಸುವುದು ಮಾತ್ರವಲ್ಲದೆ ನ್ಯಾಯಯುತ ಮತ್ತು ಸಮಾನ ಸಮಾಜದ ಅಡಿಪಾಯವನ್ನು ರೂಪಿಸುವ ಮೌಲ್ಯಗಳನ್ನು ಬಲಪಡಿಸುವ ಉದ್ದೇಶ ಹೊಂದಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><><>

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಉದಯಗಿರಿ ಘಟನೆ ಹಿನ್ನೆಲೆಯಲ್ಲಿ ನಾಳೆ ಬಿಜೆಪಿಯಿಂದ ಮೈಸೂರು ಚಲೋ ಕಾರ್ಯಕ್ರಮ

ನಡೆಯಲಿದ್ದು, ಇದರಲ್ಲಿ ತಾವು ಭಾಗವಹಿಸುವುದಾಗಿ ತಿಳಿಸಿದ್ದಾರೆ. ಉದಯಗಿರಿ ಘಟನೆಯಲ್ಲಿ ಪೊಲೀಸ್ ಠಾಣೆಗೆ ನುಗ್ಗಿ ದಾಂಧಲೆ ಮಾಡಿದವರನ್ನು ರಕ್ಷಿಸುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ ಎಂದು ದೂರಿದ್ದಾರೆ. ಬೆಳಗಾವಿ ಗಡಿ ಭಾಗದಲ್ಲಿ ಕನ್ನಡಿಗರ ಮೇಲಾಗಿರುವ ದಾಂಧಲೆ ಖಂಡನೀಯ. ಈ ನೆಲದ ನೀರು, ಅನ್ನ, ಗಾಳಿ ಸೇವಿಸಿ, ಕನ್ನಡದ ವಿರುದ್ಧ ಮಾತನಾಡುವವರನ್ನು ಪತ್ತೆ ಮಾಡಿ ಶಿಕ್ಷೆಗೆ ಗುರಿಪಡಿಸಬೇಕೆಂದು ಅವರು ಸರ್ಕಾರವನ್ನು ಒತ್ತಾಯಿಸಿದರು.

<><><><>

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ರನ್ನ ಬೆಳಗಲಿ ಗ್ರಾಮದಲ್ಲಿ ಏರ್ಪಡಿಸಿದ್ದ ರನ್ನ ವೈಭವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್ ಇಂದು ಚಾಲನೆ ನೀಡಿದರು. ಎಚ್. ಕೆ. ಪಾಟೀಲ್ ಮಾತನಾಡಿ, ರತ್ನತ್ರಯರಾದ ರನ್ನ, ಪಂಪ ಮತ್ತು ಪೊನ್ನರ ಕೊಡುಗೆಗಳು ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಿದ್ದು, ಅದನ್ನು ಕನ್ನಡಿಗರು ಮರೆಯಲು ಸಾಧ್ಯವಿಲ್ಲ. ರನ್ನನಂತಹ ಶ್ರೇಷ್ಠ ಕವಿಯ ಸ್ಮರಣೆಯಲ್ಲಿ ಸಾಂಸ್ಕೃತಿಕ ಉತ್ಸವ ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ. ತಿಮ್ಮಾಪುರ, ಜಿಲ್ಲೆಯ ಹಲವು ಶಾಸಕರು ಸೇರಿದಂತೆ ಮತ್ತಿತರ ಗಣ್ಯರು ಉತ್ಸವದಲ್ಲಿ ಉಪಸ್ಥಿತರಿದ್ದರು.

<><><><>

ದುಬೈನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯದಲ್ಲಿ ಪಾಕಿಸ್ತಾನ ಭಾರತಕ್ಕೆ ೨೪೨ ರನ್‌ಗಳ ಗೆಲುವಿನ ಗುರಿ ನೀಡಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಪಾಕಿಸ್ತಾನ ೪೯.೪ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೨೪೧ ರನ್ ಗಳಿಸಲಷ್ಟೇ ಶಕ್ತವಾಯಿತು. ಆರಂಭಿಕನಾಗಿ ಕಣಕ್ಕಿಳಿದ ಬಾಬರ್ ಅಜಂ ಕೇವಲ ೨೩ ರನ್ ಗಳಿಸಿ ಹಾರ್ದಿಕ್ ಪಾಂಡ್ಯಾಗೆ ವಿಕೆಟ್ ಒಪ್ಪಿಸಿದರು. ಪಾಕಿಸ್ತಾನ ಪರ ಸೌಧ್ ಶಕೀಲ್ ೬೨ ರನ್ ಗಳಿಸಿದರೆ, ಮೊಹಮ್ಮದ್ ರಿಜ್ವಾನ್ ೪೬ ರನ್ ಗಳಿಸಿದರು. ಭಾರತದ ಪರ ಕುಲ್‌ದೀಪ್ ಯಾದವ್ ೩ ವಿಕೆಟ್ ಗಳಿಸಿದರೆ, ಹಾರ್ದಿಕ್ ಪಾಂಡೆ ೨ ವಿಕೆಟ್ ಪಡೆದಿದ್ದಾರೆ.

<><><><>

ಪ್ರಪಂಚದ ಅನೇಕ ದೇಶಗಳು ಆಧ್ಯಾತ್ಮಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕಾಗಿ ಭಾರತದ ಕಡೆಗೆ ನೋಡುತ್ತಿವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ತುಮಕೂರಿನ ಕುಣಿಗಲ್‌ನಲ್ಲಿ ಮಾತನಾಡಿದ ಅವರು, ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಇದಕ್ಕೆ ಉದಾಹರಣೆಯಾಗಿದೆ ಎಂದು ಹೇಳಿದ್ದಾರೆ. ಬಸವೇಶ್ವರರ ಬೋಧನೆಗಳು ಇಂದಿಗೂ ಪ್ರಸ್ತುತವಾಗಿದ್ದು, ಸಮಾಜ ಸುಧಾರಣೆಗೆ ಸಹಕಾರಿಯಾಗಿದೆ. ಇಲ್ಲಿಗೆ ಬರುವ ಜನರು

ಬಸವೇಶ್ವರರ ಬೋಧನೆಗಳನ್ನು ಆಸ್ವಾಧಿಸುವ ಜೊತೆಗೆ ಜೀವನದಲ್ಲಿ ನೈತಿಕತೆ, ಸಮಾನತೆ ಮತ್ತು ಭಕ್ತಿಯನ್ನು ಅನುಸರಿಸಲು ಸ್ಪೂರ್ತಿ ಪಡೆಯುತ್ತಾರೆ ಎಂದು ತಿಳಿಸಿದ್ದಾರೆ.

<><><>

ವಿಜಯಪುರದಲ್ಲಿ ಉಪಪ್ರಾದೇಶಿಕ ವಿಜ್ಞಾನ ಕೇಂದ್ರ, ಕಿರು ತಾರಾಲಯ ಹಾಗೂ ಬಬಲೇಶ್ವರ ಮತ್ತು ವಿಜಯಪುರದಲ್ಲಿ ಎರಡು ಹಾಸ್ಟೆಲ್ ಗಳ ನಿರ್ಮಾಣಕ್ಕೆ ಒಟ್ಟು ೫೭ ಕೋಟಿ ೮೮ ಲಕ್ಷ ವ್ಯಯಿಸಲು ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ಸಿಕ್ಕಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿರುವ ಅವರು, 'ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಮೂಲಕ ಈ ಯೋಜನೆ ಕಾರ್ಯಗತಗೊಳ್ಳಲಿದೆ' ಎಂದಿದ್ದಾರೆ. ತಾರಾಲಯದಲ್ಲಿ ಡೋಮ್, ಪ್ರೊಜಕ್ಷನ್ ಸಿಸ್ಟಂ, ಒಳಾಂಗಣ, ಹೊರಾಂಗಣ ವಿಜ್ಞಾನ ಪ್ರದರ್ಶಿಕೆಗಳು, ಆಡಿಯೋ ವ್ಯವಸ್ಥೆ, ಹವಾ ನಿಯಂತ್ರಣ ವ್ಯವಸ್ಥೆ ಎಲ್ಲವೂ ಇರಲಿದೆ. ಇದರ ಮೂಲಕ ಜಿಲ್ಲೆಯ ವಿದ್ಯಾರ್ಥಿಗಳಲ್ಲಿ ವಿಜ್ಞಾನದ ತಿಳಿವಳಿಕೆಯನ್ನು ಹೆಚ್ಚಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಬಬಲೇಶ್ವರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮಮದಾಪುರದಲ್ಲಿರುವ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ.ಬಿ ಆರ್ ಅಂಬೇಡ್ಕರ್ ವಸತಿ ಶಾಲೆ ಮತ್ತು ವಿಜಯಪುರದಲ್ಲಿರುವ ವಸತಿಸಹಿತ ಪದವಿಪೂರ್ವ ಕಾಲೇಜಿಗೆ ಸ್ವಂತ ಕಟ್ಟಡಕ್ಕಾಗಿ ತಲಾ ೨೨ ಕೋಟಿ ರೂಪಾಯಿಗಳಂತೆ ಒಟ್ಟು ೪೪ ಕೋಟಿ ರೂಪಾಯಿ ಒದಗಿಸಲು ಕೂಡ ಸಂಪುಟ ಸಭೆಯಲ್ಲಿ ಹಸಿರು ನಿಶಾನೆ ಸಿಕ್ಕಿದೆ ಎಂದು ತಿಳಿಸಿದ್ದಾರೆ.

<><><>

ಲಲಿತಕಲೆಗಳು ಭಾರತೀಯ ಸಂಸ್ಕೃತಿಯ ವೈಶಿಷ್ಟತೆಯನ್ನು ತಿಳಿಸುತ್ತವೆ ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ತಿಳಿಸಿದ್ದಾರೆ. ಕೊಪ್ಪಳದಲ್ಲಿಂದು ಕರ್ನಾಟಕ ಲಲಿತಕಲಾ ಅಕಾಡೆಮಿಯಿಂದ ಹಮ್ಮಿಕೊಂಡಿದ್ದ "ನಿಮ್ಮೊಂದಿಗೆ ನಾವು" ಕಲಾವಿದರ ನಡೆ-ಜನಸಾಮಾನ್ಯರ ಕಡೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಅಕಾಡೆಮಿಗಳ ಕಾರ್ಯಕ್ರಮಗಳು ಬೆಂಗಳೂರಿಗೆ ಮಾತ್ರ ಸೀಮಿತವಾಗಿತ್ತು. ಉತ್ತರ ಕರ್ನಾಟಕ ಭಾಗಗಳಲ್ಲಿಯೂ ದೊಡ್ಡ ದೊಡ್ಡ ಪ್ರತಿಭೆಗಳಿದ್ದು, ಈಗ ಈ ಭಾಗದವರಿಗೂ ಅವಕಾಶಗಳು ಸಿಗುತ್ತಿವೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಚಿತ್ರಕಲಾ ಪ್ರದರ್ಶನ ಹಾಗೂ ಶಾಲಾ ಮಕ್ಕಳ ಕಲಾಶಿಬಿರ ನಡೆಯಿತು.

<><><>

ವಿಜಯಪುರ ಜಿಲ್ಲಾ ಪಶು ವೈದ್ಯ ಸೇವಾ ಇಲಾಖೆ, ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆ ಸಹಯೋಗದಲ್ಲಿ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಜಿಲ್ಲಾ ಮಟ್ಟದ ಶ್ವಾನ ಪ್ರದರ್ಶನಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು,

ನಗರದಲ್ಲಿ ಬಿಡಾಡಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಇದರ ನಿಯಂತ್ರಣಕ್ಕೆ ಪಾಲಿಕೆ ವತಿಯಿಂದ ಸಂತಾನಹರಣ ಚಿಕಿತ್ಸೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಶ್ವಾನ ಪ್ರದರ್ಶನದಲ್ಲಿ ಆಂಧ್ರಪ್ರದೇಶ, ಮಹಾರಾಷ್ಟ್ರ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ೨೧ ತಳಿಯ ೨೬೨ ಶ್ವಾನಗಳು ಭಾಗವಹಿಸಿ, ಶ್ವಾನಪ್ರಿಯರ ಗಮನಸೆಳೆದವು.

<><><><>

ಸಂಕ್ಷಿಪ್ತ ಸುದ್ದಿ

1. ಕೊಪ್ಪಳದ ಪ್ರಸಿದ್ಧ ಅಂಜನಾದ್ರಿ ಬೆಟ್ಟಕ್ಕೆ ಮೇಘಾಲಯದ ಗೌರವಾನ್ವಿತ ರಾಜ್ಯಪಾಲರಾದ ಸಿ.ಎಚ್.ವಿಜಯ್ ಶಂಕರ್ ಹಾಗೂ ಅವರ ಪತ್ನಿ ಎಸ್.ಶಕುಂತಲಾ ಆಗಮಿಸಿ ಹನುಮನ ದರ್ಶನ ಪಡೆದಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>